# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು-572 103 ☎:0816-2255650,2273511 ಫ್ಯಾಕ್ಸ್:0816-2270719


**ಸಂಖ್ಯೆ:ತುವಿ:ಪವಿ:2025-26/686** **ದಿನಾಂಕ:29.10.2025**

## : ಸುತ್ತೋಲೆ :

**CBCS**

ವಿಷಯ : **2025 ರ ಜುಲೈ/ಆಗಸ್ಟ್ ಮಾಹೆಗಳಲ್ಲಿ ನಡೆದ ವಿವಿಧ ಸ್ನಾತಕ ಪದವಿಗಳ ಎರಡು ಮತ್ತು ನಾಲ್ಕನೇ ಸೆಮಿಸ್ಟರ್ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಛಾಯಾಪ್ರತಿ / ಮರುಮೌಲ್ಯಮಾಪನದ ಮಾಹಿತಿ ಕುರಿತು.**

ಉಲ್ಲೇಖ : ಈ ಕಚೇರಿ ಸುತ್ತೋಲೆ ಸಂಖ್ಯೆ:ತುವಿ:ಪವಿ:2025-26/558 ದಿನಾಂಕ:09.10.2025

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2025 ರ ಜುಲೈ/ಆಗಸ್ಟ್ ಮಾಹೆಗಳಲ್ಲಿ ನಡೆದ **2019-20, 2020-21 ನೇ ಸಾಲಿನಲ್ಲಿ CBCS** ರಡಿ ಬರುವ ಬಿ.ಎ., ಬಿ.ಕಾಂ., ಬಿ.ಎಸ್ಸಿ., ಬಿ.ಸಿ.ಎ. ಮತ್ತು ಬಿ.ಬಿ.ಎಂ. ಪದವಿಗಳ **ಎರಡು, ನಾಲ್ಕು & ಆರನೇ ಸೆಮಿಸ್ಟರ್‌ನ (ಪೂರಕ) ಹಾಗೂ 2017-18ನೇ ಸಾಲಿನ ವಿದ್ಯಾರ್ಥಿಗಳ ಪೂರಕ (Double Duration)** ಪರೀಕ್ಷಾ ಫಲಿತಾಂಶವನ್ನು ಈಗಾಗಲೇ ಪ್ರಕಟಿಸಲಾಗಿದ್ದು, ವಿದ್ಯಾರ್ಥಿಗಳು ಉತ್ತರ ಪತ್ರಿಕೆಗಳ ಛಾಯಾ ಪ್ರತಿ / ಮರುಮೌಲ್ಯಮಾಪನ / ಛಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ವಿವರಗಳು ಕೆಳಕಂಡಂತಿದೆ.

| | | |
|---|---|---|
| 1. | ವಿದ್ಯಾರ್ಥಿಗಳು ಛಾಯಾ ಪ್ರತಿಗಾಗಿ ಕಾಲೇಜಿನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **03.11.2025** |
| 2. | ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ (ಛಾಯಾ ಪ್ರತಿ) | **04.11.2025** |
| 3. | ವಿಶ್ವವಿದ್ಯಾನಿಲಯಕ್ಕೆ ವಿವರಗಳನ್ನು ಸಲ್ಲಿಸಲು ಕೊನೆಯ ದಿನಾಂಕ (ಛಾಯಾ ಪ್ರತಿ) | **04.11.2025** |
| 4. | ಪರೀಕ್ಷಾ ವಿಭಾಗದಿಂದ ಕಾಲೇಜಿನವರು ಜೆರಾಕ್ಸ್ (ಛಾಯಾ ಪ್ರತಿ) ಪ್ರತಿಯನ್ನು ಪಡೆಯುವ ದಿನಾಂಕ | **06.11.2025** |
| 5. | ವಿದ್ಯಾರ್ಥಿಗಳು ಮರುಮೌಲ್ಯಮಾಪನ/ ಛಾಲೆಂಜ್ ಮೌಲ್ಯಮಾಪನಕ್ಕೆ ಕಾಲೇಜಿನಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ | **07.11.2025** |
| 6. | ಮರುಮೌಲ್ಯಮಾಪನ/ಛಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | **10.11.2025** |
| 7. | ಮರುಮೌಲ್ಯಮಾಪನ/ಛಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | **10.11.2025** |

**ಶೇಕಡಾ 15 ಕ್ಕಿಂತ ಕಡಿಮೆ ಅಂಕಗಳನ್ನು ಪಡೆದ ವಿದ್ಯಾರ್ಥಿಗಳು ಚಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸತಕ್ಕದ್ದು. ಆದಾಗ್ಯೂ ಶೇಕಡಾ 15 ಕ್ಕಿಂತ ಕಡಿಮೆ ಅಂಕಗಳನ್ನು ಪಡೆದ ವಿದ್ಯಾರ್ಥಿಗಳು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸುವುದಿಲ್ಲ. ಪ್ರಾಂಶುಪಾಲರುಗಳು ಸರಿಯಾಗಿ ಅರ್ಜಿಗಳನ್ನು ಪರಿಶೀಲಿಸಿ, ಆನ್‌ಲೈನ್‌ನಲ್ಲಿ ನಮೂದಿಸುವುದು.**

**ಛಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವವರು ಕಡ್ಡಾಯವಾಗಿ ನಿಗದಿತ ಶುಲ್ಕ ಪಾವತಿಸಿ, ಉತ್ತರ ಪತ್ರಿಕೆಯ ಛಾಯಾಪ್ರತಿಯನ್ನು ಪಡೆದು** ಸಂಬಂಧಿಸಿದ ಅಧ್ಯಾಪಕರಿಂದ ಮೌಲ್ಯಮಾಪನ ಮಾಡಿಸಿ ನೀಡಿರುವ ಅಂಕಗಳಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಅಂತಹ ವಿದ್ಯಾರ್ಥಿಗಳು ನಿಗದಿತ ಮರುಮೌಲ್ಯಮಾಪನ ಶುಲ್ಕದೊಂದಿಗೆ ಕಡ್ಡಾಯವಾಗಿ ಒಂದು ವಿಷಯಕ್ಕೆ **ರೂ. 500–00 (ರೂಪಾಯಿ ಐದು ನೂರು ಮಾತ್ರ)** ಗಳ ಹೆಚ್ಚುವರಿ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸುವುದು.

**ನಿಗದಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಯಾವುದೇ ಕಾರಣದಿಂದಲೂ ಪರಿಗಣಿಸಲಾಗುವುದಿಲ್ಲ.** ಛಾಯಾಪ್ರತಿ, ಮರುಮೌಲ್ಯಮಾಪನ ಮತ್ತು ಛಾಲೆಂಜ್ ಮೌಲ್ಯಮಾಪನ ಶುಲ್ಕವನ್ನು ತಮ್ಮ ಕಾಲೇಜಿನಲ್ಲಿಯೇ ಪಾವತಿಸಿಕೊಂಡು, **RTGS / NEFT ಮೂಲಕ ವಿಶ್ವವಿದ್ಯಾನಿಲಯದ ಎಸ್.ಬಿ.ಐ. ಖಾತೆ ಸಂ. : 36954908103 ಗೆ ನಿಗದಿಪಡಿಸಿದ ದಿನಾಂಕದೊಳಗೆ ಪಾವತಿಸಿ,** ಸೂಕ್ತ ವಿವರಗಳೊಂದಿಗೆ **ಮಾನ್ಯ ಕುಲಸಚಿವರು** (ಪರೀಕ್ಷಾಂಗ), **ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರಿಗೆ ಸಲ್ಲಿಸುವುದು. ಛಾಯಾಪ್ರತಿ, ಮರುಮೌಲ್ಯಮಾಪನ ಮತ್ತು ಛಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ವಿವರಗಳನ್ನು ದ್ವಿ–ಪ್ರತಿಯಲ್ಲಿ [**ಒಂದು ಪ್ರತಿ – ಮಾನ್ಯ ಕುಲಸಚಿವರು** (ಪರೀಕ್ಷಾಂಗ), **ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ; ಮತ್ತೊಂದು ಪ್ರತಿ – ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು**] ಸಲ್ಲಿಸಲು ಕೋರಲಾಗಿದೆ.

**ಶುಲ್ಕಗಳ ವಿವರ :**

| | | | | |
|---|---|---|---|---|
| 1. | Xerox copy for one subject with Application Fee | : | Rs. | 210-00 |
| 2. | Revaluation for one subject with Application Fee | : | Rs. | 260-00 |
| 3. | Challenge Valuation Fee (Rs.210+260+500) | : | Rs. | 970-00 |

29/10/2025

~~ಕುಲಸಚಿವರು (ಪರೀಕ್ಷಾಂಗ)~~
ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

**ಗೆ,**

**ಪ್ರಾಂಶುಪಾಲರು, ಘಟಕ / ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು,**
**ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು :**

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ಇಂದೇ ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು ಹಾಗೂ ಪ್ರಾಂಶುಪಾಲರುಗಳ ಇ–ಮೇಲ್ ವಿಳಾಸಕ್ಕೆ ಕಳುಹಿಸುವುದು.**
5. ವಿಭಾಗದ ಮೇಲ್ವಿಚಾರಕರು, ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಛೇರಿ ಪ್ರತಿ